ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ಪರೀಕ್ಷೆ/ಯುಪಿಎಸ್‌ಸಿ/2025 ದಿನಾಂಕ: 15.01.2025.

**ಪ್ರಕಟಣೆ**

**ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದಿಂದ 2024–25 ನೇ ಸಾಲಿನ ಯುಪಿಎಸ್‌ಸಿ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ನಿಯೋಜಿಸುವ ಸಂಬಂಧ ನಡೆಸಿದ ಪ್ರವೇಶ ಪರೀಕ್ಷೆಯ ಕೀ ಉತ್ತರಗಳನ್ನು ಪ್ರಕಟಿಸಿರುವ ಬಗ್ಗೆ.**

ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದಿಂದ 2024–25 ನೇ ಸಾಲಿನ ಯುಪಿಎಸ್‌ಸಿ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ನಿಯೋಜಿಸುವ ಸಂಬಂಧ ಪ್ರವೇಶ ಪರೀಕ್ಷೆಯನ್ನು ದಿನಾಂಕ 12.01.2025 ರಂದು ನಡೆಸಲಾಗಿದ್ದು, ಸದರಿ ಪರೀಕ್ಷೆಗಳ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿರುತ್ತದೆ.

ಪ್ರಕಟಿತ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ, ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಒದಗಿಸಲಾದ ಆನ್‌ಲೈನ್ ಪೋರ್ಟಲ್ ಮೂಲಕ ಮಾತ್ರವೇ ದಿನಾಂಕ 17.01.2025 ಮಧ್ಯಾಹ್ನ 12.00 ಘಂಟೆಯೊಳಗೆ ಸಲ್ಲಿಸಬಹುದಾಗಿದೆ.

ಆಕ್ಷೇಪಣೆಗಳನ್ನು ಸಲ್ಲಿಸುವ ಸಂದರ್ಭದಲ್ಲಿ ಪತ್ರಿಕೆಯ ವಿವರ, ಪರೀಕ್ಷಾ ದಿನಾಂಕ, ವರ್ಷನ್ ಕೋಡ್, ಪ್ರಶ್ನೆ ಸಂಖ್ಯೆ ಹಾಗೂ ಪೂರಕ ದಾಖಲೆಗಳನ್ನು PDF ರೂಪದಲ್ಲಿ ಸಲ್ಲಿಸಬೇಕು. ಸಲ್ಲಿಸಲಾಗುವ ಪ್ರತಿ ಆಕ್ಷೇಪಣೆಗೆ ರೂ. 50/– ನ್ನು ಪಾವತಿಸತಕ್ಕದ್ದು ಹಾಗೂ ಆಕ್ಷೇಪಣಾ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ. ನಿಗದಿತ ಅವಧಿಯೊಳಗೆ ಮೇಲ್ಕಂಡ ನಿಗದಿತ ಮಾಹಿತಿಗಳನ್ನು ಸಲ್ಲಿಸದ ಅಥವಾ ಶುಲ್ಕ ಪಾವತಿಸದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ವಿಷಯ ತಜ್ಞರ ಸಮಿತಿಯು ನಿರ್ಧರಿಸಿ ತೀರ್ಮಾನಿಸುವ ಕೀ ಉತ್ತರಗಳು ಅಂತಿಮವಾಗಿರುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in